# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **628**

ಸದಸ್ಯರ ಹೆಸರು : ಶ್ರೀ. ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : **20/02/2024**

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ | ನಗರ ಸ್ಥಳೀಯ ಸಂಸ್ಥೆಗಳ ಮಹಾಪೌರರು/ಉಪ ಮಹಾಪೌರರು/ಅಧ್ಯಕ್ಷ/ಉಪಾಧ್ಯಕ್ಷ ಮತ್ತು ಸದಸ್ಯರಿಗೆ ಮಾಸಿಕ ಗೌರವಧನವನ್ನು ಪರಿಷ್ಕರಿಸಿ ಏಳೆಂಟು ವರ್ಷಗಳೇ ಕಳೆದಿರುವುದರಿಂದ ಸರ್ಕಾರ ಸದರಿಯವರ ಮಾಸಿಕ ಗೌರವಧನವನ್ನು ಪರಿಷ್ಕರಿಸಲು ಯೋಚಿಸಿದೆಯೇ; | ಪ್ರಸ್ತುತ, ಸರ್ಕಾರದ ಆದೇಶ ಸಂಖ್ಯೆ:ನಅಇ 156 ಎಂಎಲ್‌ಆರ್ 2015; ದಿನಾಂಕ:15/09/2016 ರಲ್ಲಿರುವಂತೆ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಎಲ್ಲಾ ಚುನಾಯಿತ ಸದಸ್ಯರಿಗೆ (ಬಿಬಿಎಂಪಿ ಹೊರತುಪಡಿಸಿ) ಮಾಸಿಕ ಗೌರವಧನವನ್ನು ನೀಡಲಾಗುತ್ತಿದೆ. |
| ಆ | ಹಾಗೇ, ಮಹಾನಗರಪಾಲಿಕೆ, ನಗರಸಭೆಗಳು, ಪುರಸಭೆಗಳು ಮತ್ತು ಪಟ್ಟಣ ಪಂಚಾಯಿತಿಗಳ ಸ್ಥಾಯಿ ಸಮಿತಿ ಸದಸ್ಯರಿಗೆ ಪ್ರಸ್ತುತ ನೀಡುತ್ತಿರುವ ಸಭಾ ಭತ್ಯೆಯನ್ನು ಪರಿಷ್ಕರಿಸಲು ಸರ್ಕಾರ ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು; | ಹಲವು ನಗರ ಸ್ಥಳೀಯ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಗೌರವಧನವನ್ನು ಪರಿಷ್ಕರಿಸಲು ಕೋರಿದ್ದು, ಗೌರವಧನ ಪರಿಷ್ಕರಣೆಗೆ ತಗುಲುವ ವೆಚ್ಚದ ವಿವರಗಳೊಂದಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನು ಒಪ್ಪಿರುವುದಿಲ್ಲ. |
| ಇ | ಸರ್ಕಾರದ ಆದೇಶ ಸಂಖ್ಯೆ:ನಅಇ 156 ಎಂಎಲ್‌ಆರ್ 2015; ದಿನಾಂಕ:15/09/2016 ರಲ್ಲಿ ಮುಂದಿನ ಐದು ವರ್ಷದವರೆಗೆ ಗೌರವಧನವನ್ನು/ಭತ್ಯೆಗಳನ್ನು ಹೆಚ್ಚಿಸುವ ಅಥವಾ ಪರಿಷ್ಕರಿಸುವ ಬಗ್ಗೆ ಪರಿಗಣಿಸುವಂತಿಲ್ಲ ಎಂಬ ಷರತ್ತಿನ ಅವಧಿಯು ಈಗಾಗಲೇ ಮುಕ್ತಾಯಗೊಂಡಿರುವುದರಿಂದ ಗೌರವಧನ/ಭತ್ಯೆಗಳನ್ನು ಪರಿಷ್ಕರಿಸುವ ಬಗ್ಗೆ ಸರ್ಕಾರದ ನಿಲುವೇನು; | |
| ಈ | ಆಡಳಿತದಲ್ಲಿ ಪಾರದರ್ಶಕತೆ, ಜನರ ಸಹಭಾಗಿತ್ವ ತರಲು ಪ್ರಸ್ತುತ ಸರ್ಕಾರವು ಗ್ರಾಮ ಪಂಚಾಯಿತಿಗಳಲ್ಲಿ ವಾರ್ಡ್ ಸಭೆ ಮತ್ತು ಗ್ರಾಮ ಸಭೆಗಳನ್ನು ನಡೆಸುವಂತೆ ನಗರ | ಕರ್ನಾಟಕ ಪೌರಸಭೆಗಳ (ತಿದ್ದುಪಡಿ) ಅಧಿನಿಯಮ 2020 ನ್ನು ರಚಿಸುವ ಮೂಲಕ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್–80 ಕ್ಕೆ ಕೆಲವು ಸೇರ್ಪಡೆಗಳನ್ನು |

| | | |
|---|---|---|
| | ಸ್ಥಳೀಯ ಸಂಸ್ಥೆಗಳಲ್ಲಿಯೂ ಈ ರೀತಿಯ ಸಭೆಗಳನ್ನು ಆಯೋಜಿಸುವ ಬಗ್ಗೆ ಸಲಹೆ ನೀಡಲು ಸರ್ಕಾರದ ನಿಲುವೇನು (ಸಂಪೂರ್ಣ ವಿವರ ನೀಡುವುದು)? | ಮಾಡಿ ಪ್ರದೇಶ ಸಭಾ, ನೆರೆಹೊರೆ ಗುಂಪು ರಚನೆ, ವಾರ್ಡು ಸಮಿತಿ ರಚನೆ ಮತ್ತು ಪ್ರಕಾರ್ಯಗಳ ಕುರಿತು ವಿವರಿಸಲಾಗಿರುತ್ತದೆ. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರು ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರವನ್ನು ಬರೆದು ಸಮಿತಿಗಳ ರಚನೆಗೆ ಅಗತ್ಯ ಕ್ರಮವಹಿಸಲು ಕೋರಿದ್ದು, ಅದರಂತೆ ನೆರೆಹೊರೆ ಗುಂಪು, ಏರಿಯಾಸಭಾ ಮತ್ತು ವಾರ್ಡ್ ಸಮಿತಿಗಳ ರಚನೆಗೆ ಆಯಾ ಪಟ್ಟಣ ಪಂಚಾಯಿತಿ, ಪುರಸಭೆ ಮತ್ತು ನಗರಸಭೆಗಳಲ್ಲಿ ಕ್ರಮವಹಿಸಲಾಗುತ್ತದೆ. |

ಸಂಖ್ಯೆ:ನಅಇ 10 ಎಲ್‌ಸಿಕ್ಯೂ 2024.

(ರಹೀಂ ಖಾನ್)
**ಪೌರಾಡಳಿತ ಹಾಗೂ ಹಜ್ ಸಚಿವರು**